# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 670
ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 17-09-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರಾಮ ಪಂಚಾಯತ್ ಚುನಾವಣೆಗಳು ನಡೆದ ಕೆಲವು ತಿಂಗಳುಗಳೇ ಕಳೆದರೂ ಇದುವರೆಗೂ ಕೆಲವು ಪಂಚಾಯಿತಿಗಳಲ್ಲಿ ಅಧ್ಯಕ್ಷರು/ಉಪಾಧ್ಯಕ್ಷರುಗಳ ಮೀಸಲಾತಿ ಇನ್ನು ಅಂತಿಮವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ. |
| (ಆ) | ಶ್ರೀಘ್ರವಾಗಿ ಮೀಸಲಾತಿ ನಿಯಮ ಅಂತಿಮಗೊಳಿಸಿ ಅಧ್ಯಕ್ಷ/ಉಪಾಧ್ಯಕ್ಷರುಗಳ ಆಯ್ಕೆಗೆ ಅನುವು ಮಾಡಿಕೊಡಲಾಗುವುದೇ; (ಸದರಿ ವಿಳಂಬಕ್ಕೆ ಸೂಕ್ತ ಕಾರಣದೊಂದಿಗೆ ಮಾಹಿತಿ ಒದಗಿಸುವುದು) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲೂಕಿನ ವೇಣೂರು ಮತ್ತು ಅರಂಬೋಡಿ ಗ್ರಾಮ ಪಂಚಾಯತಿಯ ಚುನಾವಣೆಯು ದಿನಾಂಕ:29-03-2021 ರಂದು ನಡೆದಿದ್ದು, ಮೇ 15, 2021 ರ ತನಕ ಹಿಂದಿನ ಆಡಳಿತ ಮಂಡಳಿಯ ಅಧಿಕಾರಾವಧಿ ಇದ್ದು, ದಿನಾಂಕ:27-04-2021 ರ ಸರ್ಕಾರದ ಪತ್ರದಲ್ಲಿನ ನಿರ್ದೇಶನದಂತೆ ಕೋವಿಡ್-19 ರ ಕಾರಣದಿಂದ ಅಧ್ಯಕ್ಷರ/ಉಪಾಧ್ಯಕ್ಷರ ಚುನಾವಣೆಯನ್ನು ಮುಂದೂಡಲಾಗಿತ್ತು.<br><br>ತದನಂತರ ದಿನಾಂಕ:22-07-2021 ರ ಸರ್ಕಾರದ ಪತ್ರದಲ್ಲಿ ಕೋವಿಡ್-19 2ನೇ ಅಲೆಯು ಇಳಿಕೆಯಾಗುತ್ತಿರುವುದರಿಂದ ಗ್ರಾಮ ಪಂಚಾಯತಿ ಅಧ್ಯಕ್ಷ / ಉಪಾಧ್ಯಕ್ಷರ ಚುನಾವಣೆ ನಡೆಸಲು ಬಾಕಿ ಇದ್ದಲ್ಲಿ ಕೋವಿಡ್-19 ಮಾರ್ಗಸೂಚಿಗಳನ್ನು ಪಾಲಿಸಿಕೊಂಡು ಅಧ್ಯಕ್ಷರ / ಉಪಾಧ್ಯಕ್ಷರ ಚುನಾವಣೆಯನ್ನು ನಡೆಸುವಂತೆ ಜಿಲ್ಲಾಧಿಕಾರಿಯವರಿಗೆ ಸೂಚಿಸಲಾಗಿದೆ. ಅದರಂತೆ ದಕ್ಷಿಣ ಕನ್ನಡ ಜಿಲ್ಲೆ ಜಿಲ್ಲಾಧಿಕಾರಿಯವರು ದಿನಾಂಕ:13-09-2021 ರ ಪತ್ರದಲ್ಲಿ ವೇಣೂರು ಮತ್ತು ಅರಂಬೋಡಿ ಗ್ರಾಮ ಪಂಚಾಯತಿಗಳ ಚುನಾವಣೆ ಪ್ರಕ್ರಿಯೆಯನ್ನು ದಿನಾಂಕ:01-10-2021 ರೊಳಗೆ ಪೂರ್ಣಗೊಳಿಸುವಂತೆ ತಹಶೀಲ್ದಾರ್ ಬೆಳ್ತಂಗಡಿ ತಾಲ್ಲೂಕು ರವರಿಗೆ ಸೂಚಿಸಿರುತ್ತಾರೆ. |
| (ಇ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಧ್ಯಕ್ಷರು/ಉಪಾಧ್ಯಕ್ಷರುಗಳ ಆಯ್ಕೆಯು ಇನ್ನೂ ಅಂತಿಮವಾಗದೇ ಬಾಕಿ ಇರುವ ಪಂಚಾಯಿತಿಗಳ ಸಂಖ್ಯೆ ಎಷ್ಟು? (ಪಟ್ಟಿ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲೂಕಿನ ವೇಣೂರು ಮತ್ತು ಆರಂಬೋಡಿ ಗ್ರಾಮ ಪಂಚಾಯತ್ ಸಾರ್ವತ್ರಿಕ ಚುನಾವಣೆ-2021 ಕ್ಕೆ ಸಂಬಂಧಿಸಿದಂತೆ ದಿನಾಂಕ:29-03-2021 ರಂದು ಚುನಾವಣೆ ನಡೆದು ದಿನಾಂಕ:31-03-2021 ರಂದು ಮತ ಎಣಿಕೆ ಕಾರ್ಯ ನಡೆದು ಸದಸ್ಯರುಗಳ ಆಯ್ಕೆ ನಡೆದಿರುತ್ತದೆ. ಆದರೆ ಈ ಹಿಂದೆ ವೇಣೂರು ಮತ್ತು ಆರಂಬೋಡಿ ಗ್ರಾಮ ಪಂಚಾಯತ್‌ಗಳ ಪ್ರಥಮ ಸಭೆಯು ದಿನಾಂಕ:16-05-2016ರಂದು ನಡೆದಿದ್ದು, ದಿನಾಂಕ: 15-05-2021ಕ್ಕೆ ಅವಧಿ ಮುಕ್ತಾಯಗೊಂಡಿರುತ್ತದೆ. ಸದರಿ |

| | | |
|---|---|---|
| | | ಪಂಚಾಯತ್‌ಗಳಿಗೆ ಆಡಳಿತಾಧಿಕಾರಿಗಳನ್ನು ಈಗಾಗಲೇ ನೇಮಿಸಿದ್ದು, ರಾಜ್ಯಾದ್ಯಾಂತ ಕೋವಿಡ್-19ರ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಿದ ಮೇರೆಗೆ ಪ್ರಥಮ ಸಭೆಯನ್ನು ನಡೆಸಿ ನಡವಳಿ ದಾಖಲಿಸಲು ಕಾರ್ಯಸಾಧ್ಯವಾಗಿರುವುದಿಲ್ಲ.<br><br>ಆದ್ದರಿಂದ ವೇಣೂರು ಮತ್ತು ಆರಂಬೋಡಿ ಗ್ರಾಮ ಪಂಚಾಯತ್ ಗಳಿಗೆ ಈಗಾಗಲೇ ಆಡಳಿತಾಧಿಕಾರಿಗಳನ್ನ ನೇಮಕ ಮಾಡಲಾಗಿದ್ದು, ಸದರಿ ಆಡಳಿತಾಧಿಕಾರಿಗಳ ನೇತೃತ್ವದಲ್ಲಿ ಪ್ರಥಮ ಸಭೆಯನ್ನು ಆಯೋಜಿಸಿ ಅಧ್ಯಕ್ಷ/ ಉಪಾಧ್ಯಕ್ಷ ಆಯ್ಕೆ ಪ್ರಕ್ರಿಯೆ ನಿರ್ವಹಿಸಲು ಅನುಮೋದಿಸಿದೆ. ಸದರಿ ಪ್ರಕ್ರಿಯೆಯನ್ನು ದಿನಾಂಕ:01-10-2021 ರೊಳಗಾಗಿ ಪೂರ್ಣಗೊಳಿಸಿ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಛೇರಿಗೆ ವರದಿ ನೀಡಲು ದಿನಾಂಕ:13-09-2021 ರ ಪತ್ರದಲ್ಲಿ ತಹಶೀಲ್ದಾರ್ ಬೆಳ್ತಂಗಡಿ ಇವರಿಗೆ ಜಿಲ್ಲಾಧಿಕಾರಿಗಳು ಸೂಚಿಸಿರುತ್ತಾರೆ. |

ಸಂ. ಗ್ರಾಅಪ 339 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.